## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯ ಸಿವಿಲ್ ಸೇವೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ನೌಕರರಿಗೆ ಬ್ಯಾಕ್‌ಲಾಗ್ ಹುದ್ದೆಗಳಿಗೆ ಎದುರಾಗಿ ಬಡ್ತಿ ನೀಡುವಾಗ ಅನುಸರಿಸಲಾಗುತ್ತಿರುವ ರೋಸ್ಟರ್ ಬಿಂದುಗಳ ಬಗ್ಗೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 23(i) ಸೇನನಿ 2015, ಬೆಂಗಳೂರು, ದಿನಾಂಕ:04.03.2015**

**ಓದಲಾಗಿದೆ:-**

1. ದಿನಾಂಕ 27.4.1978ರ ಸರ್ಕಾರಿ ಆದೇಶ ಸಂಖ್ಯೆ: ಡಿಪಿಎಆರ್ 29 ಎಸ್‌ಬಿಸಿ 1977
2. ದಿನಾಂಕ 1.6.1978ರ ಸರ್ಕಾರಿ ಆದೇಶ ಸಂಖ್ಯೆ: ಡಿಪಿಎಆರ್ 29 ಎಸ್‌ಬಿಸಿ 1977
3. ದಿನಾಂಕ 30.08.1979ರ ಸರ್ಕಾರಿ ಆದೇಶ ಸಂಖ್ಯೆ.ಡಿಪಿಎಆರ್ 22 ಎಸ್‌ಬಿಸಿ 1979
4. ಅಧಿಸೂಚನೆ ಸಂಖ್ಯೆ. ಡಿಪಿಎಆರ್ 13 ಎಸ್‌ಆರ್ ಆರ್ 92 ದಿನಾಂಕ.01.04.1992
5. ದಿನಾಂಕ 24.6.1997ರ ಸರ್ಕಾರಿ ಆದೇಶ ಸಂಖ್ಯೆ:ಡಿಪಿಎಆರ್ 10 ಎಸ್‌ಬಿಸಿ 1997.

**ಪ್ರಸ್ತಾವನೆ:-**

ಮೇಲೆ ಕ್ರಮ ಸಂಖ್ಯೆ; (1)ರಲ್ಲಿ ಓದಲಾದ ದಿನಾಂಕ 27.4.1978ರ ಸರ್ಕಾರಿ ಆದೇಶ ಸಂಖ್ಯೆ: ಡಿಪಿಎಆರ್ 29 ಎಸ್‌ಬಿಸಿ 77ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ನೀಡುವ ಮುಂಬಡ್ತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿದ ಅಭ್ಯರ್ಥಿಗಳಿಗೆ ಕ್ರಮವಾಗಿ ಶೇಕಡ 15 ಮತ್ತು ಶೇಕಡ 3ರ ಪ್ರಮಾಣದಲ್ಲಿ ಮೀಸಲಾತಿ ಒದಗಿಸಲಾಗಿದೆ. ಈ ಮೀಸಲಾತಿಯನ್ನು ಜಾರಿಗೊಳಿಸಲು 33 ಬಿಂದುಗಳ ರೋಸ್ಟರನ್ನು ಸಿದ್ಧಪಡಿಸಲಾಗಿದೆ. ಈ ರೋಸ್ಟರನ್ನು ಮೇಲಿನ ಕ್ರ.ಸಂ.(3)ರ ಸರ್ಕಾರಿ ಆದೇಶದಲ್ಲಿ ಮಾರ್ಪಡಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ:(2)ರಲ್ಲಿ ಓದಲಾದ ದಿನಾಂಕ 1.6.1978ರ ಅಧಿಕೃತ ಜ್ಞಾಪನ ಸಂಖ್ಯೆ: ಡಿಪಿಎಆರ್ 29 ಎಸ್‌ಬಿಸಿ 77ರಲ್ಲಿ ಮುಂಬಡ್ತಿ ಮೀಸಲಾತಿಯನ್ನು ಜಾರಿಗೊಳಿಸಲು ಮಾರ್ಗಸೂಚಿಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ದಿನಾಂಕ.01/04/1992ರ ಸರ್ಕಾರದ ಅಧಿಸೂಚನೆಯಲ್ಲಿ ಯಾವುದೇ ಸೇವೆ ಅಥವಾ ಹುದ್ದೆಗೆ ನಿಗದಿಪಡಿಸಲಾದ ನೇಮಕಾತಿ ನಿಯಮಗಳಲ್ಲಿ ಏನೇ ಒಳಗೊಂಡಿದ್ದರೂ ಮುಂಬಡ್ತಿ ಕೋಟಾದಲ್ಲಿನ ಬ್ಯಾಕ್‌ಲಾಗ್ ಹುದ್ದೆಗಳನ್ನು ದಿನಾಂಕ.27/04/1978ರಿಂದ ಲೆಕ್ಕ ಹಾಕಿ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ(5)ರಲ್ಲಿ ಓದಲಾದ ದಿನಾಂಕ: 24.6.1997ರ ಸರ್ಕಾರಿ ಆದೇಶ ಸಂಖ್ಯೆ: ಡಿಪಿಎಆರ್ 10 ಎಸ್‌ಬಿಸಿ 97ರಲ್ಲಿ ಮುಂಬಡ್ತಿಯಲ್ಲಿನ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನೌಕರರಿಗೆ ಹೆಚ್ಚುವರಿ ರೋಸ್ಟರ್ ಬಿಂದುಗಳನ್ನು ಗುರುತಿಸಿ ಆದೇಶಿಸಲಾಗಿದೆ.

ಸಮಾಜ ಕಲ್ಯಾಣ ಇಲಾಖೆಯು ಮೇಲ್ಕಂಡ ಆದೇಶಗಳನ್ನು ಜಾರಿಗೊಳಿಸುವ ಸಂದರ್ಭದಲ್ಲಿ ಬ್ಯಾಕ್‌ಲಾಗ್ ಹುದ್ದೆಗಳ ಎದುರಾಗಿ ಬಡ್ತಿ ನೀಡುವಾಗ ಪರಿಶಿಷ್ಟ ಪಂಗಡದ ಅರ್ಹ ನೌಕರರು ರಿಕ್ತ ಸ್ಥಾನ ಲಭ್ಯವಿದ್ದರೂ, ಈಗಿನ ಮೀಸಲಾತಿ ವರ್ತುಲದಂತೆ 2ನೇ ಬಿಂದುವಿನ ನಂತರ ರೋಸ್ಟರ್ ಬಿಂದು 16ರವರೆಗೆ ಕಾಯಬೇಕಾಗುತ್ತದೆಂದು, ಅದೇ ರೀತಿ ಪರಿಶಿಷ್ಟ ಜಾತಿಗೆ ಸೇರಿದ ಅರ್ಹ ನೌಕರರು ರೋಸ್ಟರ್ ವರ್ತುಲದಲ್ಲಿ ನಿಗದಿಪಡಿಸಿರುವ ಹೆಚ್ಚುವರಿ ರೋಸ್ಟರ್ ಬಿಂದುಗಳು ಲಭ್ಯವಾಗುವವರೆಗೆ ಕಾಯಬೇಕಾಗಿರುವುದರಿಂದ, ಈ ವರ್ಗದ ನೌಕರರಿಗೆ ಮುಂಬಡ್ತಿಯಲ್ಲಿ ವಿಳಂಬ ಹಾಗೂ ತಾರತಮ್ಯ ಉಂಟಾದಂತಾಗುತ್ತಿದೆ ಎಂದು ತಿಳಿಸಿ, ಅದನ್ನು ಪರಿಹರಿಸಲು ಸೂಕ್ತ ತಿದ್ದುಪಡಿಗೆ ಆದೇಶ ಹೊರಡಿಸುವಂತೆ ಪ್ರಸ್ತಾವನೆಯನ್ನು ಕಳುಹಿಸಿರುತ್ತದೆ.

ಮೇಲ್ಕಂಡ ಅಂಶಗಳ ಬಗ್ಗೆ ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಬ್ಯಾಕ್‌ಲಾಗ್ ಹುದ್ದೆಗಳಿಗೆ ಎದುರಾಗಿ ಪರಿಶಿಷ್ಟ ಜಾತಿ ಮತ್ತ ಪರಿಶಿಷ್ಟ ಪಂಗಡದವರಿಗೆ ಮುಂಬಡ್ತಿ ನೀಡುವುದಕ್ಕೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಆದೇಶಿಸಿದೆ.

## <u>ಆದೇಶ</u>

ದಿನಾಂಕ: 24.6.1997ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 10 ಸೆಹಿಮ 97ರಲ್ಲಿ ಪರಿಶಿಷ್ಟ ಜಾತಿಯ ನೌಕರರಿಗೆ ನಿಗದಿಪಡಿಸಲಾಗಿರುವ ಹೆಚ್ಚುವರಿ ರೋಸ್ಟರ್ ಬಿಂದುಗಳಾದ 5, 9, 11, 18, 20, 24, 26, 30 ಮತ್ತು 32 ಹಾಗೂ ಪರಿಶಿಷ್ಟ ಪಂಗಡದ ನೌಕರರಿಗೆ ನಿಗದಿಪಡಿಸಿರುವ ಹೆಚ್ಚುವರಿ ರೋಸ್ಟರ್ ಬಿಂದು 16ಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಲಾಗಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನೌಕರರಿಗೆ ಬಡ್ತಿಯಲ್ಲಿ ಮೀಸಲಾತಿ ಒದಗಿಸಲು ಹಾಗೂ ಬಡ್ತಿಯಲ್ಲಿನ ಬ್ಯಾಕ್‌ಲಾಗ್ ಹುದ್ದೆಗಳನ್ನು ತುಂಬಲು 33 ಬಿಂದುಗಳ ರೋಸ್ಟರ್ ವರ್ತುಲದಲ್ಲಿ ಈ ಕೆಳಕಂಡಂತೆ ಕಾರ್ಯವಿಧಾನವನ್ನು ಅಳವಡಿಸಲು ಆದೇಶಿಸಿದೆ.

-3

| ವರ್ಗ | ರೋಸ್ಟರ್ ವರ್ತುಲದಲ್ಲಿನ ಮೀಸಲಾತಿ ಬಿಂದುಗಳು | ಬ್ಯಾಕ್‌ಲಾಗ್ ಹುದ್ದೆಗಳನ್ನು ತುಂಬಲು ನಿಗದಿಪಡಿಸಿರುವ ವಿಧಾನ |
|---|---|---|
| ಪರಿಶಿಷ್ಟ ಜಾತಿ | 1, 7, 14, 21, 27ನೇ ಬಿಂದುಗಳು ಮುಂದುವರಿಯುತ್ತವೆ. | ಪರಿಶಿಷ್ಟ ಜಾತಿ ನೌಕರರಿಗೆ ಬಡ್ತಿಯಲ್ಲಿ ಮೀಸಲಾತಿ ಒದಗಿಸಲು 33 ರೋಸ್ಟರ್ ಬಿಂದುಗಳ ವರ್ತುಲದಲ್ಲಿ ಹಾಲಿ ನಿಗದಿಪಡಿಸಿರುವ 1, 7, 14, 21, 27ನೇ ಬಿಂದುಗಳ ಜೊತೆಗೆ ಬ್ಯಾಕ್‌ಲಾಗ್ ಹುದ್ದೆಗಳನ್ನು ತುಂಬುವ ಸಂದರ್ಭದಲ್ಲಿ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆಗೆ ಸೀಮಿತಗೊಳಿಸಿ, ಅರ್ಹ ನೌಕರರ ಲಭ್ಯತೆಯನ್ನು ಅನುಸರಿಸಿ, ಒಂದು ರೋಸ್ಟರ್ ವರ್ತುಲದಲ್ಲಿ ಗರಿಷ್ಠ 9 ಹೆಚ್ಚುವರಿ ಬಿಂದುಗಳನ್ನು ಪರಿಗಣಿಸಿ ಬಡ್ತಿ ನೀಡುವಂತೆ ಮಾರ್ಪಡಿಸಲಾಗಿದೆ. |
| ಪರಿಶಿಷ್ಟ ಪಂಗಡ | 2ನೇ ಬಿಂದು ಮುಂದುವರಿಯುತ್ತದೆ. | ಪರಿಶಿಷ್ಟ ಪಂಗಡದ ನೌಕರರಿಗೆ ಬಡ್ತಿಯಲ್ಲಿ ಮೀಸಲಾತಿ ಒದಗಿಸಲು 33 ರೋಸ್ಟರ್ ಬಿಂದುಗಳ ವರ್ತುಲದಲ್ಲಿ ಹಾಲಿ ನಿಗದಿಪಡಿಸಿರುವ 2ನೇ ಬಿಂದುವಿನ ಜೊತೆಗೆ ಬ್ಯಾಕ್‌ಲಾಗ್ ಹುದ್ದೆಗಳನ್ನು ತುಂಬುವ ಸಂದರ್ಭದಲ್ಲಿ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆಗೆ ಸೀಮಿತಗೊಳಿಸಿ ಅರ್ಹ ನೌಕರರ ಲಭ್ಯತೆಯನ್ನು ಅನುಸರಿಸಿ ಒಂದು ರೋಸ್ಟರ್ ವರ್ತುಲದಲ್ಲಿ ಗರಿಷ್ಠ 1 ಹೆಚ್ಚುವರಿ ಬಿಂದುವನ್ನು ಪರಿಗಣಿಸಿ ಬಡ್ತಿ ನೀಡುವಂತೆ ಮಾರ್ಪಡಿಸಲಾಗಿದೆ. |

ಈ ಆದೇಶ ಹೊರಡಿಸಿದ ಸಂದರ್ಭದಲ್ಲಿ ಯಾವುದೇ ರೋಸ್ಟರ್ ವರ್ತುಲದಲ್ಲಿ ಹೆಚ್ಚುವರಿ ಮೀಸಲಾತಿ ಬಿಂದುಗಳನ್ನು ಈಗಾಗಲೇ ಉಪಯೋಗಿಸಿ, ಪೂರ್ಣಗೊಳ್ಳದೇ ಇದ್ದಲ್ಲಿ ಆ ರೋಸ್ಟರ್ ವರ್ತುಲದಲ್ಲಿ ಉಪಯೋಗಿಸಿಕೊಂಡಿರುವ ಹೆಚ್ಚುವರಿ ಮೀಸಲಾತಿ ಬಿಂದುಗಳನ್ನೂ ಒಳಗೊಂಡಂತೆ ಈಗ ನಿಗದಿಪಡಿಸಿರುವ ಗರಿಷ್ಠ ಸಂಖ್ಯೆ 9ಕ್ಕೆ ಮಿತಿಗೊಳಿಸುವುದು.

ಬ್ಯಾಕ್‌ಲಾಗ್ ಹುದ್ದೆಗಳ ಕೊರತೆಯು ಅದೇ ರೋಸ್ಟರ್ ವರ್ತುಲದಲ್ಲಿ ಸರಿದೂಗದಿದ್ದರೆ ಮುಂದಿನ ರೋಸ್ಟರ್ ವರ್ತುಲದಲ್ಲಿಯೂ ಇದೇ ಪದ್ಧತಿಯನ್ನು ಅನುಸರಿಸುವುದು. ಅಂತಹ ಕೊರತೆಯನ್ನು ಮೇಲೆ ವಿವರಿಸಿರುವ ಪದ್ಧತಿ ಅನುಸರಿಸಿ ಸರಿದೂಗಿಸತಕ್ಕದ್ದು.

-4

[illegible] ಅನ್ವಯವಾಗುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಾ: ಮಂಗಳ. ಜಿ.ಎಸ್) 4/3/15
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಇದನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 1000 ಪ್ರತಿಗಳನ್ನು ಸಿಆಸುಇ (ಸೇವಾ ನಿಯಮಗಳು-ಎ) ನಂ. 31, ವಿಧಾನ ಸೌಧ, ಬೆಂಗಳೂರು ಇವರಿಗೆ ಒದಗಿಸಬೇಕೆಂದು ಕೋರಿದೆ.

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು,
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
3. ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು
4. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
5. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-560 001
6. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-560 001
7. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು-560 001
8. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
9. ಕಾರ್ಯದರ್ಶಿಯವರು, ಕರ್ನಾಟಕ ವಿಧಾನ ಸಭೆ/ ಕರ್ನಾಟಕ ವಿಧಾನ ಪರಿಷತ್ತು, ವಿಧಾನ ಸೌಧ, ಬೆಂಗಳೂರು-560001.
10. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-01
11. *ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು-560 001
12. *ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಇಂದಿರಾನಗರ, ಬೆಂಗಳೂರು-560 038.
13. *ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-560 001
14. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು

(* ಮುಖ ಪತ್ರದೊಂದಿಗೆ)